**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.117/2022**

| | | |
|---|---|---|
| ಸಾಕ್ಷಿದಾರರ ಹೆಸರು | : ಎಂ. ಜಗದೀಶ್ | ಫ್ರಾಸಾ-11 |
| ತಂದೆಯ ಹೆಸರು | : ಮಹಾದೇವಯ್ಯ | ಚಾಸಾ-25 |
| ವಯಸ್ಸು | : 53 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪಿ.ಐ | ದಿನಾಂಕಃ 25.06.2026. |
| ವಾಸಸ್ಥಳ | : ಚಾಮರಾಜನಗರ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆ: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:**

1. ನಾನು ದಿ.24.06.2015 ರಿಂದ ದಿ.25.02.2019 ರವರೆಗೂ ಮೂಡಿಗೆರೆ ಪೋಲಿಸ್ ವೃತ್ತದಲ್ಲಿ ಸಿ.ಪಿ.ಐ ಆಗಿ ಕರ್ತವ್ಯ ನಿರ್ವಹಿಸಿದ್ದೇನೆ.

2. ಸಾಕ್ಷಿಯು ದಿ.08.02.2019 ರಂದು ಪ್ರಕರಣದ ಕಡತವನ್ನು ಚಾಸಾ-23 ರವರಿಂದ ಕಡತವನ್ನು ಸ್ವೀಕರಿಸಿಕೊಂಡು, ಅದೇದಿನ ಕೃತ್ಯ ನಡೆದ ಸ್ಥಳಕ್ಕೆ ಬೇಟಿ ನೀಡಿರುತ್ತೇನೆ. ಪಿರ್ಯಾದಿಯವರು ತೋರಿಸಿದಂತೆ ಚಾಸಾ-2 ಮತ್ತು 3 ರವರ ಸಮಕ್ಷಮ ಕೃತ್ಯ ನಡೆದ ಸ್ಥಳದಲ್ಲಿ ಮಹಜರ್ ಕ್ರಮ ಜರುಗಿಸಿರುತ್ತೇನೆ. ನಂತರ ಅದೇದಿನ ಕರಡು ನಕಾಶೆಯನ್ನು ತಯಾರಿಸಿರುತ್ತೇನೆ. ನಂತರ ಕೃತ್ಯ ನಡೆದ ಸ್ಥಳದಲ್ಲಿ ಭಾವಚಿತ್ರಗಳನ್ನು ತೆಗೆಸಿರುತ್ತೇನೆ. ನಂತರ ಅದೇದಿನ ಚಾಸಾ-11 ಮತ್ತು 12 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ನಾನು ವರ್ಗಾವಣೆಯಾದ ಕಾರಣ ಪ್ರಕರಣದ ಕಡತವನ್ನು ಮುಂದಿನ ತನಿಖೆ ಸಂಬಂಧ ಚಾಸಾ-26 ರವರಿಗೆ ನೀಡಿರುತ್ತೇನೆ.

3. ಸಾಕ್ಷಿಯು ನಿಪಿ-3 ರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಸಿ) ಎಂದು ಗುರುತಿಸಲಾಯಿತು. ಸದರಿ ಸಮಯದಲ್ಲಿ ತೆಗೆದ ಭಾವಚಿತ್ರಗಳನ್ನು ನೋಡಿ ಗುರುತಿಸಿದ್ದು, ಸದರಿ ಫೋಟೋಗಳನ್ನು ನಿಪಿ-4 ರಿಂದ 7 ಎಂದು ಗುರುತಿಸಲಾಯಿತು.

**ಪಾಟೀ ಸವಾಲು: ಆರೋಪಿತರ ಪರ ಶ್ರೀ ಹೆಚ್.ಕೆ.ಡಿ. ವಕೀಲರಿಂದ:**

1. ಸದರಿ ಪ್ರಕರಣದ ಕಡತವನ್ನು ಚಾಸಾ-23 ರವರಿಂದ ಪಡೆದುಕೊಂಡೆ ಎಂದು ಹೇಳಿರುವ ವಿಚಾರ ಸುಳ್ಳು ಎಂದರೆ ಸರಿಯಲ್ಲ. ಈ ಪ್ರಕರಣದಲ್ಲಿ ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದಿಲ್ಲ ಎಂದರೆ ಸರಿಯಲ್ಲ.

2. ಚಾಸಾ-2 ಮತ್ತು 3 ರವರ ಸಮಕ್ಷಮ ಯಾವುದೇ ಮಹಜರ್ ಕ್ರಮ ಜರುಗಿಸಿ ಫೋಟೋಗಳನ್ನು ತೆಗೆಸಿಲ್ಲ ಎಂದರೆ ಸರಿಯಲ್ಲ. ಯಾವುದೇ ಕರಡು ನಕಾಶೆಯನ್ನು ತಯಾರಿಸಿಲ್ಲ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.